**ಸಾಕ್ಷಿದಾರರನ್ನು ದಿನಾಂಕಃ 02.08.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಾದ ಶ್ರೀ SRM for MNR ರವರಿಂದಃ**

ನಾನು ದ್ವಿತೀಯ ಪಿಯುಸಿ ವರೆಗೆ ಓದಿರುತ್ತೇನೆ. ಈ ದಾವೆಯಲ್ಲಿ ತಮ್ಮ ತಾಯಿಯ ಪರವಾಗಿ ಸಾಕ್ಷ್ಯ ನುಡಿಯಲು ತಮ್ಮನ್ನು ನೇಮಕ ಮಾಡಿರುವ ಬಗ್ಗೆ ತಮ್ಮ ತಾಯಿ ಅರ್ಜಿ ಸಲ್ಲಿಸಿರುತ್ತಾರಾ ಎಂದರೆ ಸಾಕ್ಷಿಯು ನಾನೇ ಸಲ್ಲಿಸಿರುತ್ತೇನೆ ಎಂದು ನುಡಿಯುತ್ತಾರೆ. ದಾವೆ ಹೂಡುವ ಕಾಲಕ್ಕೆ ವಾದಿ ತಮ್ಮ ತಾಯಿಗೆ ಎಷ್ಟು ವರ್ಷ ವಯಸ್ಸಾಗಿತ್ತು ಎಂದು ತಿಳಿದುಕೊಂಡಿದ್ದೀರಾ ಎಂದರೆ ಸಾಕ್ಷಿಯು ಹೌದು ಎಂದು ನುಡಿದು 55 ವರ್ಷ ಎಂದು ನುಡಿಯುತ್ತಾರೆ. ಜಿ.ಪಿ.ಎ ಪತ್ರದಲ್ಲಿ ನನ್ನ ತಾಯಿಯ ವಯಸ್ಸು 65 ವರ್ಷ ಎಂದು ಬರೆದಿರುತ್ತದೆ ಎಂದರೆ ಸರಿ. ದಾವೆ ಹೂಡುವ ಕಾಲಕ್ಕೆ ದಾವಾ ಪತ್ರ ತಯಾರು ಮಾಡಲು ವಕೀಲರಿಗೆ ಯಾರು ಮಾಹಿತಿ ನೀಡಿರುತ್ತಾರೆ ಎಂದರೆ ಸಾಕ್ಷಿಯು ನಾನೇ ಎಂದು ನುಡಿಯುತ್ತಾರೆ.

ನನ್ನ ತಾಯಿ ಜಮೀನಿನಲ್ಲಿ ಕೆಲಸ ಮಾಡುತ್ತಾರೆ ಎಂದರೆ ಸರಿ. ತಮ್ಮ ತಾಯಿಗೆ ಆರೋಗ್ಯ ಸರಿಯಿಲ್ಲ ಎಂದು ತಾವು ತಮ್ಮ ಜಿ.ಪಿ.ಎ ಪ್ರಮಾಣ ಪತ್ರದಲ್ಲಿ ಹೇಳಿದ್ದು, ಈ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರ ಹಾಜರು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿದು ಆಯುರ್ವೇದ ಚಿಕಿತ್ಸೆ ಕೊಡಿಸುತ್ತಿದ್ದೇವೆ ಎಂದು ನುಡಿಯುತ್ತಾರೆ. ಜಿ.ಪಿ.ಎ ಪ್ರಮಾಣ ಪತ್ರಕ್ಕೆ ತಮ್ಮ ತಾಯಿ ಎಲ್ಲಿ ಸಹಿ ಮಾಡಿರುತ್ತಾರೆ ಎಂದರೆ ಸಾಕ್ಷಿಯು ಹೆಚ್.ಡಿ.ಕೋಟೆಯಲ್ಲಿ ಎಂದು ನುಡಿಯುತ್ತಾರೆ. ನನ್ನ ತಾಯಿ ವಾದಿ ಆರೋಗ್ಯವಾಗಿ ಚೆನ್ನಾಗಿ ಇದ್ದು, ಜಮೀನಿನಲ್ಲಿ ಕೆಲಸ ಮಾಡುತ್ತಾರೆ, ಅವರು ನ್ಯಾಯಾಲಯಕ್ಕೆ ಬಂದು ಸಾಕ್ಷ್ಯ ನುಡಿದರೆ ಸತ್ಯಾಂಶ ಗೊತ್ತಾಗುತ್ತದೆ ಎಂದು ನಾನೇ ಜಿ.ಪಿ.ಎ ಅನ್ನು ಸೃಷ್ಟಿ ಮಾಡಿ ಹಾಜರು ಮಾಡಿರುತ್ತೇನೆ ಎಂದರೆ ಸರಿಯಲ್ಲ.

ನನ್ನ ಸಹೋದರ ಶ್ರೀನಿವಾಸ ಮತ್ತು ನನ್ನ ಮೇಲೆ 1 ನೇ ಪ್ರತಿವಾದಿ ಗೋವಿಂದ ನಾಯಕ ಪೊಲೀಸ್ ಪಿರ್ಯಾದು ಕೊಟ್ಟಿದ್ದರು ಎಂದರೆ ಸರಿ. ದಿಃ 17.04.2020 ರಂದು ಪೊಲೀಸ್ ಠಾಣೆಗೆ ಹೋಗಿ ನಾನು ಮತ್ತು ನನ್ನ ತಮ್ಮ ಹೇಳಿಕೆ ಕೊಟ್ಟಿರುತ್ತೇವೆ ಎಂದರೆ ಸರಿ.

ತಮ್ಮ ಸಾಕ್ಷ್ಯ ಪ್ರಮಾಣ ಪತ್ರವನ್ನು ಯಾರು ಹೇಳಿ ಬರೆಸಿರುತ್ತಾರೆ ಎಂದರೆ ಸಾಕ್ಷಿಯು ನನ್ನ ತಾಯಿ ಎಂದು ನುಡಿಯುತ್ತಾರೆ. ಪ್ರತಿವಾದಿಯರು ಈ ದಾವೆಯಲ್ಲಿ ಏನು ತಕರಾರು ಸಲ್ಲಿಸಿರುತ್ತಾರೆ ಎಂದು ತಿಳಿದುಕೊಂಡಿದ್ದೀರಾ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಸೀತಾರಾಮು ಎಂಬುವವರು ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಕ್ರಯದ ಕರಾರು ಪತ್ರ ಮಾಡಿಕೊಟ್ಟಿದ್ದರು ಎಂದರೆ ನನಗೆ ಗೊತ್ತಿಲ್ಲ. ಇದೇ ಹೆಚ್.ಡಿ.ಕೋಟೆ ಪ್ರಧಾನ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ಅಸಲು ದಾವಾ ಸಂಃ31/2019 ದಾವೆ ಇರುವ ಬಗ್ಗೆ ಗೊತ್ತಾ ಎಂದರೆ ಸಾಕ್ಷಿಯು ಗೊತ್ತಿಲ್ಲ ಎನ್ನುತ್ತಾರೆ. ಸದರಿ ದಾವೆಯಲ್ಲಿ ನನ್ನ ತಾಯಿ ಪ್ರತಿವಾದಿಯಾಗಿದ್ದು, ನನ್ನ ತಾಯಿ ಪ್ರತಿವಾದಪತ್ರ ಸಲ್ಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಗೊತ್ತಿದ್ದರೂ ಗೊತ್ತಿಲ್ಲ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಕ್ರಯದ ಕರಾರು ಆದ ದಿನದಿಂದಲೂ 1 ನೇ ಪ್ರತಿವಾದಿಯೇ ದಾವಾ ಆಸ್ತಿಯಲ್ಲಿ ಸ್ವಾಧೀನ ಇದ್ದುಕೊಂಡು ಬರುತ್ತಿದ್ದಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ತಹಶಿಲ್ದಾರ್ ಕಛೇರಿಗೆ ನಮ್ಮ ಹೆಸರಿಗೆ ಕ್ರಯದ ಕರಾರು ಆಗಿರುತ್ತದೆ ವಾದಿಗೆ ಖಾತೆ ಮಾಡಬಾರದು ಎಂದು ತಕರಾರು ಸಲ್ಲಿಸಿದ್ದರು ಎಂದರೆ ಸರಿ . ಅರ್ಜಿಯ ಮೇರೆಗೆ ವಾದಿಯ ಹೆಸರಿಗೆ ಖಾತೆ ಮಾಡಿ ನಂತರ ಅಸಲು ದಾವಾ ಸಂಃ 31/2019 ರ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಎಂದು ಆದೇಶ ಮಾಡಿರುತ್ತಾರೆ ಎಂದರೆ ಸರಿ. ನಮಗೆ ಮಾರಾಟ ಮಾಡಿರುವ ಸೀತಾರಾಮು ರವರು 1 ನೇ ಪ್ರತಿವಾದಿಗೆ ಕ್ರಯದ ಕರಾರು ಪತ್ರವನ್ನು ನಮಗೆ ಮಾರಾಟ ಮಾಡುವ ಮೊದಲೇ ಮಾಡಿಕೊಟ್ಟಿರುವುದರಿಂದ ನನ್ನ ತಾಯಿಯ ಹೆಸರಿಗೆ ಮಾಡಿಕೊಟ್ಟ ಕ್ರಯಪತ್ರ ಬಂಧನಕಾರಿಯಾಗುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಯರು ಸ್ವಾಧೀನದಲ್ಲಿ ಇರುವ

ಮತ್ತು ಕ್ರಯದ ಕರಾರು ಆಗಿರುವ ವಿಚಾರ ಗೊತ್ತಿದ್ದರೂ ಅವರು ಸ್ವಾಧೀನ ಇಲ್ಲ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

1 ನೇ ಪ್ರತಿವಾದಿಯ ಹೆಸರಿಗೆ ದಾವಾ ಆಸ್ತಿಯು ಕ್ರಯದ ಕರಾರು ಆಗಿದ್ದು, ಅವರಿಗೆ ಕರಾರು ಆಗಿರುವ ದಾವಾ ಆಸ್ತಿಯನ್ನು ನಾನು ಮತ್ತು ತಾಯಿ ಲಪಟಾಯಿಸಬೇಕೆಂಬ ಉದ್ದೇಶದಿಂದ ಕ್ರಯಪತ್ರವನ್ನು ಸೃಷ್ಟಿ ಮಾಡಿ ಸುಳ್ಳು ದಾವೆ ಮಾಡಿಕೊಂಡು ಬಂದಿರುತ್ತೇವೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಯರು ಸ್ವಾಧೀನ ಇರುವುದರಿಂದ ದಾವಾ ಆಸ್ತಿಗೆ ಸಂಬಂಧಪಟ್ಟಂತೆ ತೊಂದರೆ ಕೊಡುವ ಸಂಭವ ಇಲ್ಲ ಎಂದರೆ ಸಾಕ್ಷಿಯು ಪ್ರತಿವಾದಿಯರು ಸ್ವಾಧೀನ ಇಲ್ಲ ಎಂದು ನುಡಿಯುತ್ತಾರೆ. ಪ್ರತಿವಾದಿಯರು ತೊಂದರೆ ಕೊಡದೇ ಇದ್ದರೂ ತೊಂದರೆ ಕೊಟ್ಟಿರುತ್ತಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಹಾಜರು ಮಾಡಿರುವ ಫೋಟೋದಲ್ಲಿರುವ ಜಮೀನು ಮತ್ತು ದಾವಾ ಆಸ್ತಿ ಬೇರೆ ಬೇರೆ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ದಾಖಲೆಗಳನ್ನು ಸೃಷ್ಟಿ ಮಾಡಿ ಹಾಜರು ಮಾಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ**

**(ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**